ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ವಿದ್ಯಾರ್ಥಿಗಳಿಗೆ ಕಾಲೇಜುಗಳಲ್ಲಿ ಕೊರೋನಾ ಸೋಂಕು ಹರಡುತ್ತಿರುವ ಬಗ್ಗೆ.

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

44 (56) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಪ್ರಸಕ್ತ ಸಾಲಿನಲ್ಲಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಿದ್ದು, ವಿದ್ಯಾರ್ಥಿಗಳಿಗೆ ಕೊರೋನಾ ಸೋಂಕು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದಲ್ಲಿ, ಇಲ್ಲಿಯವರೆಗೆ ಎಷ್ಟು ವಿದ್ಯಾರ್ಥಿಗಳಿಗೆ ಕೊರೋನಾ ಸೋಂಕು ಹರಡಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಹಾಜರಾತಿ ಶೇ.100% ಇದೆಯೇ; ಇಲ್ಲವಾದಲ್ಲಿ, ಶೇ100% ಹಾಜರಾತಿ ಪಡೆಯಲು ಸರ್ಕಾರ ಕೈಗೊಂಡ ಕ್ರಮವೇನು;

(ಇ) ಈ ರೀತಿ ಕೊರೋನಾ ಸೋಂಕು ತಗುಲಿರುವ ವಿದ್ಯಾರ್ಥಿಗಳಿಗೆ ಯಾವ ರೀತಿ ತರಗತಿಗಳನ್ನು ತೆಗೆದುಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ;

(ಈ) ತರಗತಿಗಳಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಯಾವ ಯಾವ ಕ್ರಮ ಕೈಗೊಳ್ಳಲಾಗಿದೆ;

(ಉ) ಕೊರೋನಾ ಸೋಂಕು ತಡೆಗಟ್ಟಲು ಕಾಲೇಜುಗಳಲ್ಲಿ ಯಾವ ರೀತಿಯ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗಿದೆ; ಹಾಗೂ ಪ್ರಸಕ್ತ ಸಾಲಿನ ಪದವಿ ಕಾಲೇಜುಗಳನ್ನು ಮುಂದೂಡುವ ಬಗ್ಗೆ ಸರ್ಕಾರದ ನಿಲುವೇನು?